**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–56003.**

ಸಂಖ್ಯೆ:ಎ8/ಎಸ್ಎಸ್ಎಲ್ಸಿ/ಸೆಪ್ಟಂ–2020/22/2020–21 ದಿನಾಂಕ:10.08.2020

**ಅಧಿಸೂಚನೆ**

ವಿಷಯ:–2020ನೇ ಸೆಪ್ಟಂಬರ್ ಮಾಹೆಯಲ್ಲಿ ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆ ನಡೆಸುವ ಬಗ್ಗೆ.
ಉಲ್ಲೇಖ:–1) ಸರ್ಕಾರಿ ಆದೇಶ ಸಂಖ್ಯೆ:ಇಡಿ.54.ಎಸ್.ಎಕ್ಸ್.ಎಂ.2000, ದಿನಾಂಕ:22.03.2001.
2) ಮಂಡಳಿ ಸುತ್ತೋಲೆ ಸಂಖ್ಯೆ:admin/sop/01/2019-20 ದಿನಾಂಕ:27.05.2020.
3) ಮಂಡಳಿ ಪರಿಷ್ಕೃತ ಸುತ್ತೋಲೆ ಸಂಖ್ಯೆ:ಎ8/ಎಸ್ಎಸ್ಎಲ್ಸಿ/ಪ.ಇತರೆ(ಎಸ್.ಓ.ಪಿ) /02/2020–21 ದಿನಾಂಕ:02.06.2020.

*******

ಜೂನ್/ಜುಲೈ–2020ರಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯನ್ನು ಬರೆದು ಅನುತ್ತೀರ್ಣರಾದ ಅಭ್ಯರ್ಥಿಗಳಿಗೆ ಹಾಗೂ ಈ ಹಿಂದಿನ ಸಾಲಿನಲ್ಲಿ ಅನುತ್ತೀರ್ಣರಾದ ಎಲ್ಲಾ ಅರ್ಹ ಪುನರಾವರ್ತಿತ ಅಭ್ಯರ್ಥಿಗಳಿಗೆ ಸೆಪ್ಟಂಬರ್–2020 ರಲ್ಲಿ ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆಯನ್ನು ನಡೆಸಲಾಗುವುದು. ಈ ಹಿನ್ನೆಲೆಯಲ್ಲಿ ಅರ್ಹ ಪುನರಾವರ್ತಿತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅನುತ್ತೀರ್ಣರಾದ ವಿದ್ಯಾರ್ಥಿಗಳನ್ನು ಈ ಪೂರಕ ಪರೀಕ್ಷೆಗೆ ನೋಂದಾಯಿಸಲು ಕೆಳಕಂಡಂತೆ ಕ್ರಮವಹಿಸಲು ಸೂಚಿಸಲಾಗಿದೆ.

1. ಜೂನ್/ಜುಲೈ 2020ರ ಮಾಹೆಯಲ್ಲಿ ನಡೆದ ಎಸ್ಎಸ್ಎಲ್ಸಿ ಪರೀಕ್ಷೆಗೆ ಕೋವಿಡ್–19ರ ಹಿನ್ನೆಲೆಯಲ್ಲಿ ಕ್ವಾರಂಟೈನ್‌ನಲ್ಲಿದ್ದಂತಹ ವಿದ್ಯಾರ್ಥಿಗಳು, ಕೋವಿಡ್–19 ಪಾಸಿಟೀವ್ ಎಂದು ಗುರುತಿಸಲ್ಪಟ್ಟಂತಹ ವಿದ್ಯಾರ್ಥಿಗಳು, ದಿಢೀರ್ ಅನಾರೋಗ್ಯಕ್ಕೊಳಗಾದ ಹಾಗೂ ಶಸ್ತ್ರಚಿಕಿತ್ಸೆಗೊಳಗಾದ ವಿದ್ಯಾರ್ಥಿಗಳು, ಅಪಘಾತಕ್ಕೆ ಒಳಗಾಗಿದ್ದ ವಿದ್ಯಾರ್ಥಿಗಳು, ಇತರೆ ಅನಾರೋಗ್ಯದಿಂದ ಬಳಲುತ್ತಿದ್ದಂತಹ ವಿದ್ಯಾರ್ಥಿಗಳು, ಸೀಲ್‌ಡೌನ್ ಪ್ರದೇಶದಲ್ಲಿದ್ದು ಪರೀಕ್ಷಾ ಕೇಂದ್ರಕ್ಕೆ ತೆರಳಲು ಅನಾನುಕೂಲವಾಗಿದ್ದ ವಿದ್ಯಾರ್ಥಿಗಳು ಮತ್ತು ತಮ್ಮ ಸ್ವಂತ ಗ್ರಾಮಕ್ಕೆ ಹಿಂದಿಗಿದ ವಲಸೆ ಕಾರ್ಮಿಕರ ಮಕ್ಕಳಿಗೆ ಹತ್ತಿರದ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗಿದ್ದರೂ ಸಹ ಇತರೆ ಕಾರಣಗಳಿಂದಾಗಿ ಪರೀಕ್ಷೆಗೆ ಗೈರು ಹಾಜರಾಗಿದ್ದ ವಿದ್ಯಾರ್ಥಿಗಳು ಹಾಗೂ ಇತರೆ ಯಾವುದೇ ಕಾರಣದಿಂದ ಪರೀಕ್ಷೆಗೆ ಗೈರು ಹಾಜರಿಯಾದಂತಹ ವಿದ್ಯಾರ್ಥಿಗಳು ಸೆಪ್ಟಂಬರ್–2020ರ ಮಾಹೆಯಲ್ಲಿ ನಡೆಸಲಾಗುವ ಎಸ್ಎಸ್ಎಲ್ಸಿ ಪೂರಕ ಪರೀಕ್ಷೆಗೆ ನೋಂದಾಯಿಸಿಕೊಂಡಲ್ಲಿ ಮಾತ್ರ **"ಪ್ರಥಮ ಅವಕಾಶ"** ಎಂದು ಪರಿಗಣಿಸಲಾಗುವುದು.
2. ಹಾಗೆಯೇ ಮೇಲಿನ ಪ್ರಕರಣಗಳಿಂದಾಗಿ ವಿದ್ಯಾರ್ಥಿಗಳು ಕೆಲವು ವಿಷಯಗಳಿಗೆ ಹಾಜರಾಗಿ/ಕೆಲವು ವಿಷಯಗಳಿಗೆ ಗೈರುಹಾಜರಾದಂತಹ ವಿದ್ಯಾರ್ಥಿಗಳು ಸೆಪ್ಟಂಬರ್–2020ರ ಮಾಹೆಯಲ್ಲಿ ನಡೆಸಲಾಗುವ ಎಸ್ಎಸ್ಎಲ್ಸಿ ಪೂರಕ ಪರೀಕ್ಷೆಗೆ ನೋಂದಾಯಿಸಿಕೊಂಡಲ್ಲಿ **"ಪ್ರಥಮ ಅವಕಾಶ"** ಎಂದೇ ಪರಿಗಣಿಸಲಾಗುವುದು.
3. ಮೇಲಿನ ಪ್ರಕರಣಗಳಿಂದಾಗಿ ಜೂನ್/ಜುಲೈ 2020ರ ಮಾಹೆಯಲ್ಲಿ ನಡೆದ ಪರೀಕ್ಷೆಗೆ ಹಾಜರಾಗಲು ಸಾಧ್ಯವಾಗಿಲ್ಲ ಎಂಬುದರ ಬಗ್ಗೆ ವಿದ್ಯಾರ್ಥಿಗಳ ಪೋಷಕರಿಂದ ಲಿಖಿತ ಹೇಳಿಕೆ ಪಡೆದು ಶಾಲೆಯ ಕಡತದಲ್ಲಿರಿಸುವುದು.

4. ಮೇಲಿನ ಕಾರಣಗಳಿಂದಾಗಿ ಜೂನ್/ಜುಲೈ 2020ರ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಗೈರು ಹಾಜರಾದಂತಹ ವಿದ್ಯಾರ್ಥಿಗಳು ಸೆಪ್ಟಂಬರ್-2020ರ ಪೂರಕ ಪರೀಕ್ಷೆಗೆ ನೋಂದಾಯಿಸಿಕೊಳ್ಳದೆ ನಂತರದ ಪರೀಕ್ಷೆಗೆ ನೋಂದಾಯಿಸಿಕೊಂಡಲ್ಲಿ **"ಪ್ರಥಮ ಅವಕಾಶ"** ಎಂದು ಪರಿಗಣಿಸಲಾಗುವುದಿಲ್ಲ.
5. ಜೂನ್/ಜುಲೈ 2020ರ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಎಲ್ಲಾ ಆರು ವಿಷಯಗಳಿಗೆ ಹಾಜರಾಗಿದ್ದು, ಯಾವುದಾದರೂ ವಿಷಯಗಳಲ್ಲಿ ಅನುತ್ತೀರ್ಣರಾಗಿ ಸೆಪ್ಟಂಬರ್-2020ರ ಪೂರಕ ಪರೀಕ್ಷೆಗೆ ನೋಂದಾಯಿಸಿಕೊಂಡಲ್ಲಿ ಅಂತಹ ವಿದ್ಯಾರ್ಥಿಗಳನ್ನು **"ಅನುತ್ತೀರ್ಣ ವಿದ್ಯಾರ್ಥಿಗಳೆಂದು ಹಾಗೂ 2ನೇ ಪ್ರಯತ್ನ"** ಎಂದು ಪರಿಗಣಿಸಲಾಗುವುದು.
6. 2002-03 ರಿಂದ 2019-20ರ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳನ್ನು ಶಾಲಾ ಮುಖ್ಯೋಪಾಧ್ಯಾಯರು ಮಂಡಳಿಯ www.kseeb.kar.nic.in ಜಾಲತಾಣದ School Loginನ ಮೂಲಕ ನೋಂದಣಿ ಮಾಡುವುದು. ಶಾಲಾ ಲಾಗಿನ್‌ನಲ್ಲಿ Registration for September 2020 Examನ್ನು ಕ್ಲಿಕ್‌ಮಾಡಿದಾಗ Upload Repeaters Details ಎನ್ನುವ ಆಯ್ಕೆ ದೊರಕುತ್ತದೆ. ಈ ಆಯ್ಕೆಯಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳ ನೋಂದಣಿ ಸಂಖ್ಯೆಯನ್ನು ನಮೂದು ಮಾಡಲು ಅವಕಾಶ ನೀಡಲಾಗಿದೆ. ಪರೀಕ್ಷೆಗೆ ನೋಂದಾಯಿಸಿಕೊಳ್ಳುವ ವಿದ್ಯಾರ್ಥಿಯ ನೋಂದಣಿ ಸಂಖ್ಯೆಯನ್ನು ನಮೂದು ಮಾಡಿ Submit ಕೊಟ್ಟಾಗ ಆ ವಿದ್ಯಾರ್ಥಿಯ ವಿವರಗಳು ತೆರೆದುಕೊಳ್ಳುತ್ತವೆ. ವಿದ್ಯಾರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಮಾಧ್ಯಮ, ದೈಹಿಕ ಸ್ಥಿತಿ, ಜನ್ಮ ದಿನಾಂಕ, ಪರೀಕ್ಷೆ ತೆಗೆದುಕೊಳ್ಳುತ್ತಿರುವ ಅಭ್ಯರ್ಥಿಗಳ ಭಾಷಾ ಸಂಯೋಜನೆ ಹಾಗೂ ಕೋರ್ ವಿಷಯಗಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ. ಜೂನ್/ಜುಲೈ 2020ರ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ನೋಂದಾಯಿಸಿಕೊಳ್ಳದೇ ಸೆಪ್ಟಂಬರ್-2020ರ ಪೂರಕ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ಭಾವಚಿತ್ರ (60-80 kb) ಹಾಗೂ ಸಹಿ (40-50 kb)ಯಲ್ಲಿ ಸ್ಕ್ಯಾನ್ ಮಾಡಿಟ್ಟುಕೊಂಡು ಅಪ್‌ಲೋಡ್ ಮಾಡಿ save ಮಾಡುವುದು. ಉಳಿದಂತೆ ಜೂನ್/ಜುಲೈ-2020ರ ಪರೀಕ್ಷೆಗೆ ನೋಂದಾಯಿಸಿಕೊಂಡು ಪೂರಕ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡಲು ಅವಕಾಶವಿರುವುದಿಲ್ಲ.
7. 2011 ರಿಂದ ಜೂನ್ 2017ರ ವರೆಗೆ ಪರೀಕ್ಷೆಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ 6 ಪ್ರಯತ್ನಗಳು ಮುಕ್ತಾಯಗೊಂಡಿರುವುದರಿಂದ ಸೆಪ್ಟಂಬರ್ 2020ರ ಪೂರಕ ಪರೀಕ್ಷೆಯನ್ನು ತೆಗೆದುಕೊಳ್ಳಲು ಅವಕಾಶವಿರುವುದಿಲ್ಲ. ಈ ವಿದ್ಯಾರ್ಥಿಗಳು ಮಾರ್ಚ್/ಏಪ್ರಿಲ್-2021ರ ಪರೀಕ್ಷೆಗೆ ಹೊಸದಾಗಿ ಖಾಸಗಿ ವಿದ್ಯಾರ್ಥಿಯಾಗಿ ನೋಂದಾಯಿಸಿಕೊಂಡು ಎಲ್ಲಾ 06 ವಿಷಯಗಳ ಪರೀಕ್ಷೆಗೆ ಹಾಜರಾಗಬೇಕಾಗುತ್ತದೆ. ಖಾಸಗಿ ಅಭ್ಯರ್ಥಿ ಪರೀಕ್ಷೆಗೆ ಕುಳಿತುಕೊಳ್ಳಲು ವಿಧಿಸಿರುವ ಷರತ್ತುಗಳನ್ನು ಪಾಲಿಸಬೇಕು.
8. 2003ಕ್ಕೂ ಹಿಂದಿನ ವರ್ಷಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ನೋಂದಾಯಿಸಲು ಈ ಹಿಂದೆ ಇದ್ದಂತೆ MSA ಅರ್ಜಿಗಳನ್ನು ಭರ್ತಿ ಮಾಡಿ ಅರ್ಜಿ ಮೂಲಕ ಸಲ್ಲಿಸಬಹುದಾಗಿದೆ. ಈ ವಿದ್ಯಾರ್ಥಿಗಳಿಗೆ ಆನ್‌ಲೈನ್‌ನಲ್ಲಿ ನೋಂದಾಯಿಸಲು ಅವಕಾಶ ಕಲ್ಪಿಸಲಾಗಿರುವುದಿಲ್ಲ. ಇಂತಹ ಅಭ್ಯರ್ಥಿಗಳ ಎಂ.ಎಸ್.ಎ ಫಾರಂನಲ್ಲಿ ವಿದ್ಯಾರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ 2 ಭಾವಚಿತ್ರಗಳನ್ನು ಅಂಟಿಸಿ ಧೃಢೀಕರಿಸಿ ಸಲ್ಲಿಸಬೇಕು. ಎಂ.ಎಸ್.ಎ ಅರ್ಜಿಗಳನ್ನು ಪರಿಶೀಲಿಸುವಾಗ ಎಂ.ಎಸ್.ಎ ನಲ್ಲಿರುವ ಶಾಲಾ ಸಂಕೇತವು ತಮ್ಮ ಶಾಲೆಯದೇ ಎಂಬುದನ್ನು ಖಚಿತಪಡಿಸಿಕೊಳ್ಳುವುದು. ಈ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ನಿಗದಿತ ಬ್ಯಾಂಕ್ NEFT ಚಲನ್ ಮೂಲಕ ಪಾವತಿಸಿ ಎಂ.ಎಸ್.ಎ ಅರ್ಜಿ, ಭಾವಚಿತ್ರ, ಶುಲ್ಕ ಪಾವತಿಯ ಚಲನ್‌ನೊಂದಿಗೆ ಮಂಡಳಿಗೆ ಸಲ್ಲಿಸುವುದು. ಈ ಮೂರು ಮಾಹಿತಿಗಳಿದ್ದಲ್ಲಿ ಮಾತ್ರ ಅರ್ಜಿಗಳನ್ನು ಪರಿಗಣಿಸಲಾಗುವುದು.

ಇಲ್ಲವಾದಲ್ಲಿ ವಿದ್ಯಾರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುತ್ತದೆ. ಒಂದು ವೇಳೆ ಈ ವಿದ್ಯಾರ್ಥಿಗಳ ಎಂ.ಎಸ್.ಎ ಗಳು ಶಾಲೆಯಲ್ಲಿ ಲಭ್ಯವಿಲ್ಲದಿದ್ದಲ್ಲಿ ಮಂಡಳಿಯ ವಿಭಾಗೀಯ ಕಛೇರಿಗಳಿಂದ ಪಡೆದು ಸಲ್ಲಿಸುವುದು ಕಡ್ಡಾಯ.

**9.** ಏಪ್ರಿಲ್–2018ರಲ್ಲಿ ಪ್ರಥಮ ಬಾರಿಗೆ ಕುಳಿತ ಪರೀಕ್ಷಾರ್ಥಿಗಳಿಗೆ ತೇರ್ಗಡೆಯಾಗಲು ಸತತ 6 ಪ್ರಯತ್ನಗಳ ಅವಕಾಶ ಕಲ್ಪಿಸಿದೆ. ಈ ಬಗ್ಗೆ ಈ ಕಛೇರಿಯ ಸುತ್ತೋಲೆಗಳಲ್ಲಿ ಮತ್ತು ಮಾರ್ಗದರ್ಶಿ ಕೈಪಿಡಿಗಳಲ್ಲಿ ವಿಸ್ತಾರವಾಗಿ ವಿವರಿಸಲಾಗಿದೆ. ಏಪ್ರಿಲ್–2018ರ ಪರೀಕ್ಷೆಯಲ್ಲಿ ಕುಳಿತು ತೇರ್ಗಡೆಯಾಗದ ಪರೀಕ್ಷಾರ್ಥಿಗಳಿಗೆ ಸೆಪ್ಟಂಬರ್–2020ರ ಪೂರಕ ಪರೀಕ್ಷೆ ಕಡೆಯ ಅವಕಾಶವಾಗಿರುತ್ತದೆ. ಆದ್ದರಿಂದ ನಿಮ್ಮ ಶಾಲಾ/ಕಾಲೇಜುಗಳಲ್ಲಿ ಇಂತಹ ವಿದ್ಯಾರ್ಥಿಗಳಿದ್ದಲ್ಲಿ, ಕಡೆಯ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳುವಂತೆ ತಿಳಿಸಿದೆ. 06 ಪ್ರಯತ್ನಗಳ ನಂತರವೂ ಅನುತ್ತೀರ್ಣರಾದಲ್ಲಿ ಖಾಸಗಿ ಅಭ್ಯರ್ಥಿಯಾಗಿ ನೋಂದಾವಣೆಯಾಗಿ ಹೊಸದಾಗಿ ಆರು ವಿಷಯಗಳಿಗೂ ಪರೀಕ್ಷೆಗೆ ಹಾಜರಾಗಬೇಕಾಗುತ್ತದೆ.

10. ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಪ್ರವರ್ಗ–1ರ ಎಲ್ಲಾ ವಿದ್ಯಾರ್ಥಿಗಳಿಗೆ ಮಾತ್ರ ಪೂರಕ ಪರೀಕ್ಷೆಯ ಪರೀಕ್ಷಾ ಶುಲ್ಕದಿಂದ ವಿನಾಯಿತಿ ನೀಡಲಾಗಿದೆ.

<u>ಅನುತ್ತೀರ್ಣ ವಿದ್ಯಾರ್ಥಿಗಳು ಪಾವತಿಸಬೇಕಾಗಿರುವ ಪರೀಕ್ಷಾ ಶುಲ್ಕದ ವಿವರಗಳು:</u>

| ಕ್ರಮ ಸಂಖ್ಯೆ | ಪರೀಕ್ಷಾ ಶುಲ್ಕದ ವಿವರ |
|---|---|
| **01** | ಒಂದು ವಿಷಯಕ್ಕೆ ರೂ.320/– (ಮೂರು ನೂರ ಇಪ್ಪತ್ತು ರೂಪಾಯಿಗಳು) |
| **02** | ಎರಡು ವಿಷಯಕ್ಕೆ ರೂ.386/– (ಮೂರು ನೂರ ಎಂಬತ್ತಾರು ರೂಪಾಯಿಗಳು) |
| **03** | ಮೂರು ಅಥವಾ ಮೂರಕ್ಕಿಂತ ಮೇಲ್ಪಟ್ಟು ರೂ.520/– (ಐದು ನೂರ ಇಪ್ಪತ್ತು ರೂಪಾಯಿಗಳು) |

**<u>ಕೋವಿಡ್–19 ಹಿನ್ನೆಲೆಯಲ್ಲಿ ಕ್ರಮಸಂಖ್ಯೆ 01 ಮತ್ತು 02ರಲ್ಲಿ ಸೂಚಿಸಿರುವ ಅಭ್ಯರ್ಥಿಗಳು ಗೈರು ಹಾಜರಾಗಿರುವ ವಿಷಯಗಳಿಗೆ ಶುಲ್ಕವಿನಾಯಿತಿ ನೀಡಲಾಗಿದೆ. ಆದ್ದರಿಂದ ಗೈರು ಹಾಜರಾದ ವಿಷಯವನ್ನು ಹೊರತುಪಡಿಸಿ ಅನುತ್ತೀರ್ಣರಾದ ವಿಷಯಗಳಿಗೆ ಮಾತ್ರ ಮೇಲಿನಂತೆ ಶುಲ್ಕವನ್ನು ಪಾವತಿಸುವುದು.</u>**

**ಆನ್‌ಲೈನ್‌ನಲ್ಲಿ ಪರೀಕ್ಷಾ ಅರ್ಜಿಯನ್ನು ನೋಂದಾಯಿಸಲು ಹಾಗೂ NEFT ಚಲನ್ ಮೂಲಕ ಬ್ಯಾಂಕ್‌ಗೆ ಪರೀಕ್ಷಾ ಶುಲ್ಕ ಪಾವತಿಸಲು ನಿಗದಿಪಡಿಸಿದ ದಿನಾಂಕ:–**

| ಕ್ರಮ ಸಂಖ್ಯೆ | ವಿವರ | ನಿಗದಿಪಡಿಸಿರುವ ದಿನಾಂಕ |
|---|---|---|
| 01 | ಪರೀಕ್ಷಾರ್ಥಿಗಳಿಂದ ಪರೀಕ್ಷಾ ಶುಲ್ಕ ಸ್ವೀಕರಿಸಲು ಮತ್ತು ಆನ್‌ಲೈನ್‌ನಲ್ಲಿ ವಿದ್ಯಾರ್ಥಿಗಳ ವಿವರಗಳನ್ನು ಅಪ್‌ಲೋಡ್ ಮಾಡುವ ಕಾರ್ಯ <u>ಪ್ರಾರಂಭಿಸಲು</u> ನಿಗದಿಪಡಿಸಿದ ದಿನಾಂಕ: | 11.08.2020 |
| 02 | ಪರೀಕ್ಷಾರ್ಥಿಗಳಿಂದ ಪರೀಕ್ಷಾ ಶುಲ್ಕ ಸ್ವೀಕರಿಸಲು ಮತ್ತು ಆನ್‌ಲೈನ್‌ನಲ್ಲಿ ವಿದ್ಯಾರ್ಥಿಗಳ ವಿವರಗಳನ್ನು ಅಪ್‌ಲೋಡ್ ಮಾಡಲು <u>**ಕೊನೆಯ**</u> ದಿನಾಂಕ: | 20.08.2020 |

| | | |
|---|---|---|
| 03 | ರೂ.200/-ರ ದಂಡ ಶುಲ್ಕದೊಂದಿಗೆ ಪರೀಕ್ಷಾರ್ಥಿಗಳಿಂದ ಪರೀಕ್ಷಾ ಶುಲ್ಕ ಸ್ವೀಕರಿಸಲು ಮತ್ತು ಆನ್‌ಲೈನ್‌ನಲ್ಲಿ ವಿದ್ಯಾರ್ಥಿಗಳ ವಿವರಗಳನ್ನು ಅಪ್‌ಲೋಡ್ ಮಾಡಲು **ಕೊನೆಯ** ದಿನಾಂಕ: | 24.08.2020 |
| 04 | ಆನ್‌ಲೈನ್‌ನಲ್ಲಿ ವಿದ್ಯಾರ್ಥಿಗಳ ವಿವರಗಳನ್ನು ಅಪ್‌ಲೋಡ್ ಮಾಡಲು ನಿಗದಿಪಡಿಸಿದ ದಿನಾಂಕದ ನಂತರ (ಅಂದರೆ ದಿ:25.08.2020 ರಿಂದ) NEFT ಚಲನ್ ಜನರೇಟ್ ಮಾಡಿಕೊಂಡು ಬ್ಯಾಂಕಿಗೆ ಪಾವತಿಸಲು **ಕೊನೆಯ** ದಿನಾಂಕ: | 28.08.2020 |
| 05 | NEFT ಚಲನ್ ಮೂಲಕ ಪರೀಕ್ಷಾ ಶುಲ್ಕವನ್ನು ಬ್ಯಾಂಕ್‌ಗೆ ಪಾವತಿಸಿದ ಬ್ಯಾಂಕ್‌ನ ಮೂಲ ಚಲನ್ ಪ್ರತಿ ಮತ್ತು ಇತರೆ ಎಲ್ಲಾ ಪೂರಕ ದಾಖಲೆಗಳನ್ನು ಮಂಡಳಿಗೆ ತಲುಪಿಸುವಂತೆ ಕ್ರಮವಹಿಸಲು ನಿಗಧಿಪಡಿಸಿದ **ಕೊನೆಯ** ದಿನಾಂಕ: | 02.09.2020 |

11. ಪರೀಕ್ಷಾರ್ಥಿಗಳ ಪರೀಕ್ಷಾ ಶುಲ್ಕವನ್ನು ಪಾವತಿಸಲು ಮತ್ತು ಆನ್‌ಲೈನ್‌ನಲ್ಲಿ ಅಭ್ಯರ್ಥಿಗಳ ವಿವರಗಳನ್ನು ನೋಂದಾಯಿಸಲು ಮೇಲೆ ನಿಗಧಿಪಡಿಸಿರುವ ದಿನಾಂಕದ ನಂತರ ಜಾಲತಾಣದಲ್ಲಿ ಅಪ್‌ಲೋಡ್ ಮಾಡಲು ಅವಕಾಶವಿರುವುದಿಲ್ಲ.
12. ಜೂನ್/ಜುಲೈ-2020ರ ಎಸ್.ಎಸ್.ಎಲ್.ಸಿ. ಪರೀಕ್ಷೆಯನ್ನು ಹಾಜರಾತಿ ಕೊರತೆಯಿಂದ ಬರೆಯದಿರುವ ಶಾಲಾ ವಿದ್ಯಾರ್ಥಿಗಳು ಸೆಪ್ಟಂಬರ್-2020ರ ಪೂರಕ ಪರೀಕ್ಷೆ ಬರೆಯಲು ಅವಕಾಶವಿಲ್ಲ.
13. ಖಾಸಗಿ ಅಭ್ಯರ್ಥಿಗಳು ಪ್ರಥಮ ಬಾರಿಗೆ ಈ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲ. ಜೂನ್/ಜುಲೈ-2020ರ ಪರೀಕ್ಷೆಗೆ ಶುಲ್ಕ ಪಾವತಿಸಿ ಪ್ರವೇಶ ಪತ್ರ ಪಡೆದು ಅನಾರೋಗ್ಯ, ಅಪಘಾತದಿಂದ ಆಸ್ಪತ್ರೆಗೆ ಚಿಕಿತ್ಸೆಗೊಳಗಾಗಿ ದಾಖಲಾದ ಪ್ರಕರಣಗಳಲ್ಲಿ, ಮತ್ತು ಇನ್ನಿತರೆ ಕಾರಣಗಳಿಂದ ಆ ಪರೀಕ್ಷೆಯನ್ನು ತೆಗೆದುಕೊಳ್ಳದ ವಿದ್ಯಾರ್ಥಿಗಳು ಸೆಪ್ಟಂಬರ್-2020ರ ಪರೀಕ್ಷೆಗೆ ನಿಗಧಿತ ಪರೀಕ್ಷಾ ಶುಲ್ಕ ಪಾವತಿಸಿ ಪರೀಕ್ಷೆಯನ್ನು ತೆಗೆದುಕೊಳ್ಳಬಹುದು.
14. ಇತರೆ ಶಾಲೆಯ ವಿದ್ಯಾರ್ಥಿಗಳ ಅರ್ಜಿಗಳನ್ನು ಯಾವುದೇ ಕಾರಣಗಳಿಂದ ತಮ್ಮ ಶಾಲೆಯ ಮುಖೇನ ಸಲ್ಲಿಸುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ.
15. 2003ಕ್ಕೂ ಹಿಂದಿನ ಪುನರಾವರ್ತಿತ ಅಭ್ಯರ್ಥಿಗಳು ಪರೀಕ್ಷಾ ಶುಲ್ಕವನ್ನು ನಿಗಧಿತ **ಬ್ಯಾಂಕ್ NEFT ಚಲನ್** ಮೂಲಕ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಪಾವತಿಸಿ ಎಂಎಸ್‌ಎ ಪ್ರತಿಯೊಂದಿಗೆ ಮೂಲಚಲನ್ ಪ್ರತಿಯನ್ನು ಮಂಡಳಿಗೆ ಸಲ್ಲಿಸುವುದು. ಮೇಲೆ ನಿಗಧಿಪಡಿಸಿದ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂಬುದನ್ನು ಇನ್ನೊಮ್ಮೆ ಶಾಲಾ ಮುಖ್ಯಸ್ಥರಿಗೆ ಸ್ಪಷ್ಟವಾಗಿ ತಿಳಿಸಿದೆ.
16. ಅನುತ್ತೀರ್ಣ ವಿದ್ಯಾರ್ಥಿಗಳು ಛಾಯಾಪ್ರತಿ, ಮರುಮೌಲ್ಯಮಾಪನಕ್ಕೆ ಅರ್ಜಿಸಲ್ಲಿಸಿದ್ದಲ್ಲಿ ಫಲಿತಾಂಶಕ್ಕೆ ಕಾಯದೆ ಸೆಪ್ಟಂಬರ್-2020ರ ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆಗಾಗಿ **ನಿಗಧಿತ ದಿನಾಂಕದೊಳಗೆ** ಶುಲ್ಕ ಪಾವತಿಸಿ ನೋಂದಾಯಿಸಿಕೊಳ್ಳುವುದು ಕಡ್ಡಾಯವಾಗಿರುತ್ತದೆ.
17. ಪರೀಕ್ಷಾರ್ಥಿಗಳಿಂದ ಪರೀಕ್ಷಾ ಶುಲ್ಕ ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದ ನಂತರ ಸೆಪ್ಟಂಬರ್ 2020ರ ಪೂರಕ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ನಾಮಾಯಾದಿ ಪಟ್ಟಿ (Nominal Roll)ಯನ್ನು Download ಮಾಡುವುದು. ನಂತರ ಪರೀಕ್ಷಾ ಶುಲ್ಕದ ಚಲನ್‌ನ್ನು Generate ಮಾಡಿ ಚಲನ್‌ನಲ್ಲಿ ಮುದ್ರಿತವಾದ ಪರೀಕ್ಷಾ ಶುಲ್ಕವನ್ನು ಬ್ಯಾಂಕ್‌ಗೆ ಜಮಾ ಮಾಡುವುದು.
18. ಶಾಲಾ ಮುಖ್ಯಸ್ಥರು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಶುಲ್ಕವನ್ನು ಮಂಡಳಿ **ಜಾಲತಾಣದಲ್ಲಿ ಚಲನ್ ಜನರೇಟ್ ಮಾಡಿಕೊಂಡು ರಾಷ್ಟ್ರೀಕೃತ ಬ್ಯಾಂಕ್‌ನಲ್ಲೇ ಜಮಾ ಮಾಡಬೇಕು.** ಆನ್‌ಲೈನ್ ಮೂಲಕ ವಿದ್ಯಾರ್ಥಿಗಳ

ವಿವರಗಳನ್ನು ನೋಂದಣಿ ಮಾಡಿದ ನಂತರ ನಾಮಯಾದಿ ಪಟ್ಟಿ (Nominal Roll) Download ಮಾಡಿಕೊಂಡು, ಮೂಲ ಬ್ಯಾಂಕ್ ಚಲನ್‌ನೊಂದಿಗೆ ದಿನಾಂಕ:02.09.2020 ರೊಳಗೆ ಈ ಕೆಳಗೆ ವಿವರಿಸಿರುವ ಶಾಖಾಧಿಕಾರಿಗಳಿಗೆ ತಲುಪುವಂತೆ ಕ್ರಮವಹಿಸುವುದು. ಯಾವುದೇ ಕಾರಣಕ್ಕೂ ವಿಭಾಗೀಯ ಕಾರ್ಯದರ್ಶಿಗಳಿಗಾಗಲಿ, ಜಿಲ್ಲಾ ಉಪನಿರ್ದೇಶಕರಿಗಾಗಲಿ ಅಥವಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗಾಗಲಿ ಈ ಅರ್ಜಿಗಳನ್ನು ಸಲ್ಲಿಸಬಾರದು. ಲಕೋಟೆಯ ಮೇಲೆ **ಸೆಪ್ಟಂಬರ್–2020ರ ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆಯ ಚಲನ್** ಎಂದು ಬರೆಯುವುದು.

19. 2003ಕ್ಕೂ ಹಿಂದಿನ ವರ್ಷಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳ ಎಂ.ಎಸ್.ಎ ಮೂಲಕ ಸಲ್ಲಿಸುವ ಪ್ರಸ್ತಾವನೆಯ ಲಕೋಟೆಯ ಮೇಲೆ **ಸೆಪ್ಟಂಬರ್ 2020ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯ ಅರ್ಜಿಗಳು** ಎಂದು ಬರೆಯುವುದು ಹಾಗೂ ನಿಮ್ಮ ಜಿಲ್ಲೆಗೆ ಸಂಬಂಧಿಸಿದ ಮಂಡಳಿಯ ಅಧಿಕಾರಿಗಳ ಹೆಸರು ಮತ್ತು ಶಾಖೆಯನ್ನು ಲಕೋಟೆಯ ಮೇಲೆ ತಪ್ಪದೇ ಬರೆಯುವುದು.
20. ಮಂಡಳಿ ನಿಗದಿಪಡಿಸಿರುವ ಅಂತಿಮ ದಿನಾಂಕ **"ಸಾರ್ವತ್ರಿಕ ರಜಾ ದಿನ"** ಎಂಬುದಾಗಿ ಘೋಷಿಸಿದ್ದಲ್ಲಿ ಮಾರನೇ ಕೆಲಸದ ದಿನವನ್ನು ಕೊನೆಯ ದಿನಾಂಕವೆಂದು ಪರಿಗಣಿಸುವುದು. ಈ ಕೆಳಗೆ ನಮೂದಿಸಿರುವ ಮಂಡಳಿಯ ಅಧಿಕಾರಿಗಳು ಮತ್ತು ಉಸ್ತುವಾರಿ ನಿರ್ವಹಿಸುವ ಜಿಲ್ಲೆಗಳ ವಿವರಗಳನ್ನು ನೀಡಿದೆ. ಸಂಬಂಧಿಸಿದ ಶಾಲಾ ಮುಖ್ಯಸ್ಥರು ನಿಮ್ಮ ಜಿಲ್ಲೆಗೆ ಸಂಬಂಧಿಸಿದ ಅಧಿಕಾರಿಗಳ ಹೆಸರನ್ನು ಲಕೋಟೆಯ ಮೇಲೆ ತಪ್ಪದೇ ಬರೆಯಬೇಕು.

**ಸೆಪ್ಟಂಬರ್ 2020ರ ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆಗೆ ಕೆಳಕಂಡ ದಾಖಲೆಗಳನ್ನು ಶಾಲಾ ಮುಖ್ಯೋಪಾಧ್ಯಾಯರು ದಿನಾಂಕ: 02.09.2020 ರೊಳಗೆ ಸಲ್ಲಿಸುವುದು ಕಡ್ಡಾಯ.**

1. ಮುಖಪುಟ (Covering Letter)
2. ಆನ್‌ಲೈನ್ ಮೂಲಕ Download ಮಾಡಿಕೊಂಡ ನಾಮಯಾದಿ ಪಟ್ಟಿ (Nominal Roll)
3. ಶುಲ್ಕ ಪಾವತಿಸಿದ ಮೂಲ ನೆಫ್ಟ್ ಚಲನ್- (Original NEFT Challan)
4. 2003ಕ್ಕೂ ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ NSR/NSPR ಅಭ್ಯರ್ಥಿಗಳ ಎಂಎಸ್‌ಎ ಮತ್ತು ನಾಮಿನಲ್ ರೋಲ್‌ಗಳನ್ನು ಸಲ್ಲಿಸುವುದು.

| ಕ್ರ ಸಂ | ಶಾಖೆ | ಪರಿಶೀಲನಾ ಅಧಿಕಾರಿಗಳು ಶ್ರೀಮತಿ: ಶ್ರೀ | ಜಿಲ್ಲೆ | ದೂರವಾಣಿ ಸಂಖ್ಯೆ | ಕಛೇರಿಯ ದೂರವಾಣಿ |
|---|---|---|---|---|---|
| 1 | ಎಫ್ | ಗಾಯಿತ್ರಿ ದೇವಿ<br>ಹಿರಿಯ ಸಹಾಯಕ ನಿರ್ದೇಶಕರು | ಬೆಂಗಳೂರು ದಕ್ಷಿಣ / ಹಾವೇರಿ / ಶಿವಮೊಗ್ಗ | 9986090437 | 08023345579 / 08023344676 |
| 2 | ಜಿ | ಎಂ.ವಿ.ಕುಮಾರಿ<br>ಹಿರಿಯ ಸಹಾಯಕ ನಿರ್ದೇಶಕರು | ಬೆಂಗಳೂರು ಉತ್ತರ / ಚಿಕ್ಕಬಳ್ಳಾಪುರ / ಕೋಲಾರ | 8762404243 | 08023345579 / 08023344676 |
| 3 | ಹೆಚ್ | ಎಂ.ಎನ್.ಶ್ರೀನಿವಾಸ್<br>ಸಹಾಯಕ ನಿರ್ದೇಶಕರು | ಚಿತ್ರದುರ್ಗ/ದಾವಣಗೆರೆ/ಬೆಂಗಳೂರು ಗ್ರಾಮಾಂತರ/ರಾಮನಗರ | 9449052591 | 08023345579 / 08023344676 |
| 4 | ಐ | ಎಂ.ಜಿ.ಜಯಪ್ರಕಾಶ್,<br>ಸಹಾಯಕ ನಿರ್ದೇಶಕರು | ಚಾಮರಾಜನಗರ/ಮಂಡ್ಯ/ ತುಮಕೂರು/ ಮಧುಗಿರಿ | 9845401773 | 08023345579 / 08023344676 |

| | | | | | |
|---|---|---|---|---|---|
| 5 | ಜೆ | ಬಾಗ್ಯವತಮ್ಮ ಸಹಾಯಕ ನಿರ್ದೇಶಕರು | ಮೈಸೂರು/ ಹಾಸನ/ ಚಿಕ್ಕಮಗಳೂರು/ ಕೊಡಗು | 9449812887 | 08023345579 / 08023344676 |
| 6 | ಕೆ | ಹೆಚ್ ಎಸ್ ಸಂಧ್ಯಾ ಸಹಾಯಕ ನಿರ್ದೇಶಕರು | ಗದಗ/ ಕೊಪ್ಪಳ/ ಬಿಜಾಪುರ/ ಬಾಗಲಕೋಟೆ | 9886846881 | 08023345579 / 08023344676 |
| 7 | ಎಲ್ | ಸೀತಾಲಕ್ಷ್ಮಿ ಸಹಾಯಕ ನಿರ್ದೇಶಕರು | ಧಾರವಾಡ/ ಚಿಕ್ಕೋಡಿ/ ಬೆಳಗಾವಿ | 9480590754 | 08023345579 / 08023344676 |
| 8 | ಎಂ | ಬಿ ಎಸ್ ಪಟ್ಟಣಶೆಟ್ಟಿ ಹಿರಿಯ ಸಹಾಯಕ ನಿರ್ದೇಶಕರು | ಮಂಗಳೂರು/ ಉಡುಪಿ/ ಕಾರವಾರ/ಶಿರಸಿ/ ರಾಯಚೂರು | 9900595060 | 08023345579 / 08023344676 |
| 9 | ಎನ್ | ಬಿ ನರೇಂದ್ರಕುಮಾರ್ ಸಹಾಯಕ ನಿರ್ದೇಶಕರು | ಗುಲ್ಬರ್ಗಾ/ ಯಾದಗಿರಿ/ ಬೀದರ್/ ಬಳ್ಳಾರಿ | 9900190492 | 08023345579 / 08023344676 |

**ವಿಶೇಷ ಸೂಚನೆ: ಈ ಅಧಿಸೂಚನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಮನನ ಮಾಡಿಕೊಂಡು ಜೂನ್/ಜುಲೈ 2020ರ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಗೈರುಹಾಜರಾದ ಅರ್ಹ ವಿದ್ಯಾರ್ಥಿಗಳಿಗೆ / ಅನುತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ಹಾಗೂ ಪುನರಾವರ್ತಿತ ಅಭ್ಯರ್ಥಿಗಳ/ಪೋಷಕರ ಗಮನಕ್ಕೆ ಎಲ್ಲಾ ಮಾಹಿತಿಗಳನ್ನು ತಂದು ಸೆಪ್ಟಂಬರ್-2020ರ ಪೂರಕ ಪರೀಕ್ಷೆಗೆ ನಿಗಧಿತ ಸಮಯದೊಳಗೆ ನೋಂದಾಯಿಸಲು ಅಗತ್ಯ ಕ್ರಮಕೈಗೊಳ್ಳಲು ತಿಳಿಸಿದೆ.**

ಕಾರ್ಯದರ್ಶಿಗಳು : 080-23445579

ಉಪನಿರ್ದೇಶಕರು ಆಡಳಿತ : 080-23562267

(ವಿ. ಸುಮಂಗಲ)
ನಿರ್ದೇಶಕರು, ಪರೀಕ್ಷೆಗಳು

ಗೆ,

1. ರಾಜ್ಯದ ಎಲ್ಲಾ ಪ್ರೌಢ ಶಾಲೆ / ಕಿರಿಯ ಕಾಲೇಜುಗಳ ಮುಖ್ಯೋಪಾಧ್ಯಾಯರಿಗೆ ಸೂಕ್ತಕ್ರಮಕ್ಕಾಗಿ. (ಮಂಡಳಿಯ ಜಾಲತಾಣದ ಶಾಲಾ ಲಾಗಿನ್ ಮೂಲಕ)
2. ಮಂಡಳಿಯ ಎಲ್ಲಾ ಪರಿಶೀಲನಾ ಶಾಖೆಯ ಅಧಿಕಾರಿಗಳು ಮತ್ತು ಅಧೀಕ್ಷಕರಿಗೆ
3. ರಾಜ್ಯದ ಎಲ್ಲಾ ವಿಭಾಗೀಯ ಕಾರ್ಯದರ್ಶಿಗಳು ಹಾಗೂ ಪದ ನಿಮಿತ್ತ ಸಹನಿರ್ದೇಶಕರುಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ (ಈ ಮೇಲ್ ಮುಖಾಂತರ)
4. ರಾಜ್ಯದ ಎಲ್ಲಾ ಉಪನಿರ್ದೇಶಕರುಗಳಿಗೆ ಮತ್ತು ಎಸ್.ಎಸ್.ಎಲ್.ಸಿ. ಪರೀಕ್ಷೆಯ ನೋಡಲ್ ಅಧಿಕಾರಿಯವರಿಗೆ (ಈ ಮೇಲ್ ಮುಖಾಂತರ ಮತ್ತು ಇಓ ಲಾಗಿನ್ ಮುಖಾಂತರ)
5. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ. (ಈ ಮೇಲ್ ಮುಖಾಂತರ)
6. ಉಪನಿರ್ದೇಶಕರು(ಆಡಳಿತ) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು.
7. ಲೆಕ್ಕಾಧಿಕಾರಿಗಳು, ಲೆಕ್ಕಪತ್ರ ಶಾಖೆ
8. ನಿರ್ದೇಶಕರು, ಪರೀಕ್ಷೆಗಳು / ಕಾರ್ಯದರ್ಶಿಯವರ ಆಪ್ತಶಾಖೆ
9. ಕಛೇರಿ ಪ್ರತಿ